ರೆವಿನ್ಯೂ ಸರ್ವೇ ಮತ್ತು ಸೆಟಲ್‌ಮೆಂಟ್ ಇಲಾಖೆ.

ಂಬರ್ 78. ತಾರೀಖು 6ನೇ ಮಾಹೆ ಮೇ 1884.

ಸಮಸ್ತ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, ಇದರಡಿ ಕಂಡ ಸರಕಾರ ಗ್ರಾಮಗಳ ರೆವಿನ್ಯೂ ಸರ್ವೆ ಜಮಾಬಂದಿಯು, ಇದೇ ತಿಂಗಳ 19ನೇ ತಾರೀಖಿನಲ್ಲಿ ಯಾ ಆಪಮೂಲಿಗೆ ಪ್ರಾರಂಭಿಸಲ್ಪಡುತ್ತೆ.

ಚನ್ನರಾಯಪಟ್ಟಣ ಬಾಬತು ಗ್ರಾಮಗಳು 396
ಅರಕೀಕೆರೆ ಬಾಬತು ಗ್ರಾಮಗಳು .. 18

ಅತ್ತಿಕುಪ್ಪಾ ಬಾಬತು ಗ್ರಾಮಗಳು .. 2

ಜೆ. ಪಿ. ಗ್ಯಾಮ್ಟ್,
ಸೂ॥ ರೆ॥ ಸರ್ವೆ ಮತ್ತು ಸೆಟಲ್‌ಮೆಂಟ್, ಮೈಸೂರ್.

ಫಿನಾನ್ಷಿಯಲ್ ಇಲಾಖೆ.

1882ನೇ ಮೈಸೂರು ರೈಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ ಪರಾ ಬರೆಯಲ್ಪಡಬಹುದಾದಂತಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್ ಕೋಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸ್‌ಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜು ಮಾಡಿರುವರೆ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ರೈಫ್ಟಿಗೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸರ್ಸ್,
ಕಾಂಪ್ಟ್ರೋಲರ್.

ಅಂಚೇ ಇಲಾಖೆ.

ನಂ. 77—47. ತಾರೀಖು 13ನೇ ಮೇ 1884.

ಇದರಿಂದ ಸಕಲಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದೀವಾನರವರ ಆಜ್ಞೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೊಸಬಿಳಿ ಅಂಚೆ ಆಫೀಸ್‌ಗಳು ಸ್ಥಾಪಿಸಲ್ಪಟ್ಟಿರುತ್ತವೆ:—

ತಾಲ್ಲೂಕು.	ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ಆನೇಕಲ್ ..	ದೊಮ್ಮಸಂದ್ರ.
ನಂಜನಗೂಡು ..	ಹುಲ್‌ಹಳ್ಳಿ.

ಬಿ. ಮರಿಗಂಗಯ್ಯ,
ಅಂಚೇ ಬಕ್ಷಿ.